All India Radio: Bangalore
National Bulletin In Kannada
28.03.2026  19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

28.03.2026  19.35 hrs

<>><><*><><<>

ಮುಖ್ಯಾಂಶಗಳು

೧. ಸೌದಿ ಅರೇಬಿಯಾದ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ

೨. ದೇಶಾದ್ಯಂತ ಪಿಎನ್‌ಜಿ ಸೇವೆಗಳ ವಿಸ್ತರಣೆ ಕುರಿತು ದೆಹಲಿಯಲ್ಲಿಂದು ದುಂಡುಮೇಜಿನ ಸಭೆ

೩. ಮನ್ ಕಿ ಬಾತ್ ೧೩೨ನೇ ಆವೃತ್ತಿ: ಭಾರತೀಯರನ್ನುದ್ದೇಶಿಸಿ ನಾಳೆ ಪ್ರಧಾನಿ ಮನದ ಮಾತು

೪. ಐಪಿಎಲ್ ಟಿ-೨೦ ಕ್ರಿಕೆಟ್; ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

<>><><*><><<>

ಪ್ರಧಾನಿ ನರೇಂದ್ರ ಮೋದಿ ಇಂದು ಸೌದಿ ಅರೇಬಿಯಾದ ರಾಜಕುಮಾರ ಮತ್ತು ಪ್ರಧಾನಿ ಮೊಹಮ್ಮದ್ ಬಿನ್ ಸಲ್ಮಾನ್ ಅವರೊಂದಿಗೆ ಮಾತುಕತೆ ನಡೆಸಿದರು.  ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಕುರಿತು ಉಭಯ ನಾಯಕರು ಚರ್ಚಿಸಿದರು. ನೌಕಾಯಾನ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳುವ ಮತ್ತು ಹಡಗು ಮಾರ್ಗಗಳನ್ನು ಮುಕ್ತ ಹಾಗೂ ಸುರಕ್ಷಿತವಾಗಿಡುವ ಅಗತ್ಯತೆಯ ಬಗ್ಗೆ ಇಬ್ಬರೂ ನಾಯಕರು ಒತ್ತಿ ಹೇಳಿದರು.  ಪ್ರಾದೇಶಿಕ ಇಂಧನ ಮೂಲಸೌಕರ್ಯದ ಮೇಲಿನ ದಾಳಿಯನ್ನು ಭಾರತ ಖಂಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸೌದಿ ಅರೇಬಿಯಾದಲ್ಲಿ ಭಾರತೀಯ ಸಮುದಾಯದ ಕಲ್ಯಾಣಕ್ಕಾಗಿ ನಿರಂತರ ಬೆಂಬಲ ನೀಡಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಇದೇ ವೇಳೆ ಸೌದಿ ಅರೇಬಿಯಾದ ಪ್ರಧಾನಿಗೆ ಧನ್ಯವಾದ ಅರ್ಪಿಸಿದರು.

<>><><*><><<>

ಉತ್ತರ ಪ್ರದೇಶದ ಜೇವರ್‌ನಲ್ಲಿರುವ ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹಂತ-೧ ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು.  ಇದನ್ನು ಸುಮಾರು ೧೧ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಒಟ್ಟು ಹೂಡಿಕೆಯೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ. ಈ ವಿಮಾನ ನಿಲ್ದಾಣದ ಉದ್ಘಾಟನೆ ಜಾಗತಿಕ ವಿಮಾನಯಾನ ಕೇಂದ್ರವಾಗುವತ್ತ ಸಾಗಿರುವ ಭಾರತದ ಪಯಣದಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.

ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ನೋಯ್ಡಾದ ಈ ವಿಮಾನ ನಿಲ್ದಾಣದ ಅಭಿವೃದ್ಧಿಯಿಂದಾಗಿ ಉತ್ತರಪ್ರದೇಶದ ಆಗ್ರಾ, ಮಥುರಾ, ಅಲಿಗಢ, ಗಾಜಿಯಾಬಾದ್, ಮೀರತ್, ಇಟಾವ, ಬುಲೆಂದ್‌ಶೆಹರ್, ಫರೀದಾಬಾದ್ ಸೇರಿದಂತೆ ಎಲ್ಲಾ ಪ್ರದೇಶಗಳಲ್ಲಿ ಲಾಭಾದಾಯಕವಾಗಲಿದೆ. ರಾಜ್ಯದ ರೈತರು, ಸಣ್ಣ ಮತ್ತು ಮಧ್ಯಮ ಉದ್ಯಮಿಗಳು ಹಾಗೂ ಯುವಕರಿಗೆ ಹಲವು ಹೊಸ ಅವಕಾಶಗಳನ್ನು ಈ ವಿಮಾನ ನಿಲ್ದಾಣ ಸೃಷ್ಟಿಸಲಿದೆ ಎಂದು ಹೇಳಿದರು.

<>><><*><><<>

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹಾಗೂ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಅವರು ಇಂದು ದೆಹಲಿಯಲ್ಲಿ ಪೈಪ್ಡ್ ನೈಸರ್ಗಿಕ ಅನಿಲ-ಪಿಎನ್‌ಜಿ ಸೇವೆಗಳ ವಿಸ್ತರಣೆ ಮತ್ತು ನಗರ ಪ್ರದೇಶಗಳಲ್ಲಿ ಅಗತ್ಯ ಸೇವೆಗಳ ನಿರ್ವಹಣೆಯ ಕುರಿತು ದುಂಡುಮೇಜಿನ ಸಭೆ ನಡೆಸಿದರು. ಈ ಸಭೆಯು ನಗರ ಪ್ರದೇಶಾದ್ಯಂತ ಪಿಎನ್‌ಜಿ ಜಾಲದ ವಿಸ್ತರಣೆಯನ್ನು ವೇಗಗೊಳಿಸಲು ಮತ್ತು ಅಗತ್ಯ ಸೇವೆಗಳ ತಡೆರಹಿತ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಪ್ರಮುಖ ಪಾಲುದಾರರನ್ನು ಒಂದೆಡೆ ಸೇರಿಸಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಸಚಿವ ಹರ್ದೀಪ್ ಸಿಂಗ್ ಪುರಿ, ಜಾಗತಿಕ ಇಂಧನ ಪರಿಸ್ಥಿತಿಯನ್ನು ಪ್ರಸ್ತಾಪಿಸಿ, ಇಂಧನ ಭದ್ರತೆ ಹಾಗೂ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸಲು ಪಿಎನ್‌ಜಿ ಮೂಲಸೌಕರ್ಯವನ್ನು ಬಲಪಡಿಸುವ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದರು. ಈಗಾಗಲೇ ಮೂಲಸೌಕರ್ಯ ಲಭ್ಯವಿರುವ ಪ್ರದೇಶಗಳಲ್ಲಿ ಪಿಎನ್‌ಜಿ ಅಳವಡಿಕೆಯನ್ನು ಸಕ್ರಿಯವಾಗಿ ಉತ್ತೇಜಿಸಲು ಅವರು ರಾಜ್ಯಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಕರೆ ನೀಡಿದರು. ಪಿಎನ್‌ಜಿ ವಿಸ್ತರಣೆಯನ್ನು ವೇಗಗೊಳಿಸುವಂತೆ ಸಚಿವ ಮನೋಹರ್ ಲಾಲ್ ಕರೆ ನೀಡಿದರು. ನಗರ ಯೋಜನೆಯಲ್ಲಿ ಪಿಎನ್‌ಜಿ ಮೂಲಸೌಕರ್ಯ ಅಭಿವೃದ್ಧಿ, ಕೊನೆಯ ಹಂತದ ಸಂಪರ್ಕದ ಸುಗಮಗೊಳಿಸುವಿಕೆ ಮತ್ತು ಜಾರಿಯಲ್ಲಿರುವ ನಗರಾಭಿವೃದ್ಧಿ ಉಪಕ್ರಮಗಳೊಂದಿಗೆ ಸಮನ್ವಯ ಸಾಧಿಸುವುದು ಸೇರಿದಂತೆ ಪ್ರಮುಖ ಆದ್ಯತೆಗಳನ್ನು ಅವರು ವಿವರಿಸಿದರು. ಅಲ್ಲದೇ ೫೦ ಲಕ್ಷ ಹೊಸ ಪಿಎನ್‌ಜಿ ಸಂಪರ್ಕಗಳನ್ನು ಒದಗಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಹಾಕಿಕೊಳ್ಳಲಾಗಿದೆ ಎಂದು ಸಚಿವ ಮನೋಹರ್ ಲಾಲ್ ತಿಳಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಅಗತ್ಯ ವಸ್ತುಗಳ ಪೂರೈಕೆಯಲ್ಲಿ ಅಡೆತಡೆಯಿಲ್ಲದಂತೆ ನೋಡಿಕೊಳ್ಳುವುದು, ತಪ್ಪು ಮಾಹಿತಿಯನ್ನು ತಡೆಯುವುದು ಮತ್ತು ಇಂಧನ ಕಾಳಸಂತೆಯನ್ನು ತಡೆಗಟ್ಟುವ ಅಗತ್ಯವನ್ನು ಒತ್ತಿ ಹೇಳಿದರು. ಮೇಲ್ವಿಚಾರಣೆ ಮತ್ತು ಜಾಗೃತ ಕಾರ್ಯವಿಧಾನಗಳನ್ನು ಬಲಪಡಿಸಲು ಮತ್ತು ಕಾರ್ಯಸಾಧ್ಯವಿರುವ ಕಡೆಗಳಲ್ಲಿ ಗ್ರಾಹಕರು ಎಲ್‌ಪಿಜಿ ಯಿಂದ ಪಿಎನ್‌ಜಿ ಗೆ ಬದಲಾಗಲು ಪ್ರೋತ್ಸಾಹಿಸುವಂತೆ ಅವರು ರಾಜ್ಯಗಳಿಗೆ ಸಲಹೆ ನೀಡಿದರು.

<>><><*><><<>

ಭಾರತದಲ್ಲಿ ಕೇವಲ ಐದರಿಂದ ಹತ್ತು ದಿನಗಳ ತೈಲ ದಾಸ್ತಾನು ಮಾತ್ರ ಉಳಿದಿವೆ ಎಂದು ಹೇಳುವ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ. ಈ ಹೇಳಿಕೆಗಳು ದಾರಿತಪ್ಪಿಸುವಂತಿವೆ ಎಂದು ಕೇಂದ್ರ ವಾರ್ತಾ ಶಾಖೆಯ ಸತ್ಯ ಶೋಧನಾ ಘಟಕ ಹೇಳಿದೆ. ದೇಶದಲ್ಲಿ ಎಲ್ಲಿಯೂ ಪೆಟ್ರೋಲ್, ಡೀಸೆಲ್ ಅಥವಾ ಎಲ್‌ಪಿಜಿ ಕೊರತೆಯಿಲ್ಲ. ಇಂಧನ ಪೂರೈಕೆ ಪರಿಸ್ಥಿತಿ ಸ್ಥಿರವಾಗಿದೆ, ಸುರಕ್ಷಿತವಾಗಿದೆ ಮತ್ತು ನಿರಂತರವಾಗಿ ಇದನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ಕೇಂದ್ರ ವಾರ್ತಾ ಶಾಖೆಯ ಸತ್ಯ ಶೋಧನಾ ಘಟಕ ತಿಳಿಸಿದೆ.

<>><><*><><<>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<>><><*><><<>

ಫ್ರಾನ್ಸ್‌ನಲ್ಲಿ ನಡೆದ ಜಿ-೭ ವಿದೇಶಾಂಗ ಸಚಿವರ ಸಭೆಯ ಸಂದರ್ಭದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭೇಟಿಯ ಸಮಯದಲ್ಲಿ ಪಶ್ಚಿಮ ಏಷ್ಯಾ ಬಿಕ್ಕಟ್ಟು ಸೇರಿದಂತೆ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಚರ್ಚೆ ನಡೆಸಲಾಯಿತು ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

<>><><*><><<>

ಸ್ಮಿತ್ಸೋನಿಯನ್‌ನ ರಾಷ್ಟ್ರೀಯ ಏಷ್ಯನ್ ಕಲೆಯ ವಸ್ತುಸಂಗ್ರಹಾಲಯದಿಂದ ಮೂರು ಅಮೂಲ್ಯವಾದ ಪ್ರಾಚೀನ ವಸ್ತುಗಳನ್ನು ಭಾರತಕ್ಕೆ ಹಿಂತಿರುಗಿಸಲಾಗುವುದು ಎಂದು ಅಮೆರಿಕ ದೃಢಪಡಿಸಿದೆ. ಈ ವಸ್ತುಗಳಲ್ಲಿ ೯ನೇ ಶತಮಾನದ ಕಂಚಿನ ನಟರಾಜ ವಿಗ್ರಹ, ೧೨ನೇ ಶತಮಾನದ ಶಿವ ಮತ್ತು ಉಮಾ ದೇವರ ಸೋಮಸ್ಕಂದ ಶಿಲ್ಪ ಮತ್ತು ೧೬ನೇ ಶತಮಾನದ ಸಂತ ಸುಂದರರ್ ಮತ್ತು ಅವರ ಪತ್ನಿ ಪರವಿ ಅವರ ಚಿತ್ರಣ ಸೇರಿವೆ. ವಾಪಸಾತಿಯನ್ನು ಔಪಚಾರಿಕಗೊಳಿಸುವ ಒಪ್ಪಂದಕ್ಕೆ ಅಮೆರಿಕದಲ್ಲಿರುವ ಭಾರತೀಯ ಮಿಷನ್‌ನ ಉಪ ಮುಖ್ಯಸ್ಥ ರಾಯಭಾರಿ ನಮಗ್ಯ ಖಂಪಾ ಮತ್ತು ಎನ್‌ಎಂಎಎ ನಿರ್ದೇಶಕ ಡಾ. ಚೇಸ್ ರಾಬಿನ್ಸನ್ ಸಹಿ ಹಾಕಿದರು.

<>><><*><><<>

೧೯ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಗೆ ಇಂದು ಅದ್ಧೂರಿ ಚಾಲನೆ ದೊರೆಯಿತು. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<>><><*><><<>

ಕೇಂದ್ರ ಸರ್ಕಾರ, ರಾಷ್ಟ್ರೀಯ ವಿಜ್ಞಾನ ಪುರಸ್ಕಾರ-೨೦೨೬ಕ್ಕೆ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ. ಈ ಪ್ರಶಸ್ತಿಯು, ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಅತ್ಯುತ್ತಮ ಕೊಡುಗೆಗಳನ್ನು ಗುರುತಿಸುವ ಪ್ರತಿಷ್ಠಿತ ರಾಷ್ಟ್ರೀಯ ಉಪಕ್ರಮವಾಗಿದೆ. ರಾಷ್ಟ್ರೀಯ ಅಭಿವೃದ್ಧಿಗೆ ಕೊಡುಗೆ ನೀಡಿದ ವಿಜ್ಞಾನಿಗಳು, ತಂತ್ರಜ್ಞರು ಮತ್ತು ನಾವೀನ್ಯಕಾರರನ್ನು ಗೌರವಿಸುತ್ತದೆ.

ರಾಷ್ಟ್ರೀಯ ವಿಜ್ಞಾನ ಪುರಸ್ಕಾರವನ್ನು ವಿಜ್ಞಾನ ರತ್ನ, ವಿಜ್ಞಾನ ಶ್ರೀ, ವಿಜ್ಞಾನ ಯುವ-ಶಾಂತಿ ಸ್ವರೂಪ್ ಭಟ್ನಾಗರ್ ಮತ್ತು ವಿಜ್ಞಾನ ತಂಡ ಸೇರಿದಂತೆ ನಾಲ್ಕು ವಿಭಿನ್ನ ವಿಭಾಗಗಳಲ್ಲಿ ನೀಡಲಾಗುತ್ತದೆ.

<>><><*><><<>

ನೇಪಾಳದ ನೂತನ ಪ್ರಧಾನಿಯಾಗಿ ಬಾಲೇಂದ್ರ ಶಾ ಪ್ರಮಾಣವಚನ ಸ್ವೀಕರಿಸಿದ ಮರುದಿನವೇ ಇಂದು ನೇಪಾಳ ಮಾಜಿ ಪ್ರಧಾನಿ ಕೆ.ಪಿ.ಶರ್ಮಾ ಓಲಿ ಅವರನ್ನು ಬಂಧಿಸಲಾಗಿದೆ. ಯುಎಂಎಲ್ ಪಕ್ಷದ ಅಧ್ಯಕ್ಷರ ಬಂಧನ ವಿರೋಧಿಸಿ, ಸಿಪಿಎನ್- ಯುಎಂಎಲ್ ಕಾರ್ಯಕರ್ತರು ಕಠ್ಮಂಡುವಿನಲ್ಲಿ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ. ವಿವಿಧ ಸಂಘಟನೆಗಳ ಕಾರ್ಯಕರ್ತರು ಕಠ್ಮಂಡುವಿನ ಬಾಬರ್ ಮಹಲ್‌ನಲ್ಲಿರುವ ಜಿಲ್ಲಾ ನ್ಯಾಯಾಲಯದ ಮುಂದೆ ಪ್ರತಿಭಟನೆ ನಡೆಸಿದರು. ನಿರ್ಬಂಧಿತ ಪ್ರದೇಶಕ್ಕೆ ಪ್ರತಿಭಟನಾಕಾರರು ನುಗ್ಗಲು ಪ್ರಯತ್ನಿಸಿದಾಗ ಪೊಲೀಸರು ಅವರನ್ನು ತಡೆದರು. ಈ ವೇಳೆ, ಪೊಲೀಸರು ಮತ್ತು ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು, ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ಪೊಲೀಸರು ಲಾಠಿ ಪ್ರಹಾರ ನಡೆಸಿ, ಪ್ರತಿಭಟನಾಕಾರರನ್ನು ಚದುರಿಸಿದ್ದಾರೆ.

<>><><*><><<>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಕ್ಯಾಮರೂನ್‌ನ ಯಾವುಂಡೆಯಲ್ಲಿ ನಾರ್ವೆಯ ವಿದೇಶಾಂಗ ವ್ಯವಹಾರಗಳ ಸಚಿವ ಎಸ್ಪೆನ್ ಬಾರ್ತ್ ಈಡೆ ಮತ್ತು ಬ್ರಿಟನ್ ವ್ಯಾಪಾರ ನೀತಿಯ ರಾಜ್ಯ ಸಚಿವ ಕ್ರಿಸ್ ಬ್ರ್ಯಾಂಟ್ ಅವರೊಂದಿಗೆ ಸಭೆ ನಡೆಸಿದರು. ವಿಶ್ವ ವ್ಯಾಪಾರ ಸಂಸ್ಥೆ-ಡಬ್ಲ್ಯುಟಿಒ ೧೪ನೇ ಸಚಿವರ ಸಮ್ಮೇಳನದ ಸಂದರ್ಭದಲ್ಲಿ ಈ ಸಭೆ ನಡೆಯಿತು. ಸಭೆಯಲ್ಲಿ, ಸುಧಾರಿತ, ಪ್ರಸ್ತುತ ಮತ್ತು ಪರಿಣಾಮಕಾರಿ ವಿಶ್ವ ವ್ಯಾಪಾರ ಸಂಸ್ಥೆಗೆ ಭಾರತದ ಪೂರ್ಣ ಬೆಂಬಲವನ್ನು ಸಚಿವ ಪಿಯೂಷ್ ಗೋಯಲ್ ಪುನರುಚ್ಚರಿಸಿದರು.

<>><><*><><<>

ಯುಎಇ ಅಧ್ಯಕ್ಷ ಶೇಕ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು, ಅಬುಧಾಬಿಯಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ಮಾತುಕತೆ ನಡೆಸಿದರು. ಪ್ರಾದೇಶಿಕ ಭದ್ರತಾ ಬೆಳವಣಿಗೆಗಳು ಮತ್ತು ಜಾಗತಿಕ ಸ್ಥಿರತೆ, ಅಂತಾರಾಷ್ಟ್ರೀಯ ಸಂಚಾರ ವ್ಯವಸ್ಥೆ ಹಾಗೂ ವಿಶ್ವ ಆರ್ಥಿಕತೆಯ ನಡುವೆ ಅವುಗಳ ಪ್ರಭಾವದ ಕುರಿತು ಉಭಯ ನಾಯಕರು ಮಾತುಕತೆ ನಡೆಸಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>